# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2795
ಸದಸ್ಯರ ಹೆಸರು : ಶ್ರೀ ಆರ್.ಬಿ. ತಿಮ್ಮಾಪೂರ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 28-03-2022
ಉತ್ತರಿಸುವ ಸಚಿವರು : ಮಾನ್ಯ ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆ, ಸೊರಬ ತಾಲ್ಲೂಕು ಕುಪ್ಪಗಡ್ಡೆ ಗ್ರಾಮದಲ್ಲಿ ನೂತನವಾಗಿ 1*10 ಎಂ.ವಿ.ಎ 110/11 ಕೆ.ವಿ. ವಿದ್ಯುತ್ ಉಪ ಕೇಂದ್ರ ನಿರ್ಮಿಸುವ ಹಾಗೂ ತೋಗರ್ಸಿ ವಿದ್ಯುತ್ ಉಪ ಕೇಂದ್ರದಿಂದ ಕುಪ್ಪಗಡ್ಡೆಯವರೆಗೆ ಡಿ.ಸಿ. ಗೋಪುರಗಳ ಮೇಲೆ ಸುಮಾರು 11.648 ಕಿ.ಮೀ. ಏಕ ಪ್ರಸರಣ ಮಾರ್ಗವನ್ನು ನಿರ್ಮಿಸಲು ಪ್ರಸ್ತಾಪಿಸಿರುವ ಸುಮಾರು 6.048 ಹೆಕ್ಟೇರ್ ಪ್ರದೇಶವು ಸಾಮಾಜಿಕ ಅರಣ್ಯ ಪ್ರದೇಶದಲ್ಲಿ ಹಾದುಹೋಗಿದೆಯೇ; | ಹೌದು. |
| ಆ) | ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಗೆ ಅರಣ್ಯ ಇಲಾಖೆ ಅನುಮತಿ ನೀಡಿದೆಯೇ; ಈವರೆಗೂ ನೀಡದಿದ್ದಲ್ಲಿ ಅದಕ್ಕೆ ಕಾರಣಗಳೇನು; | ಅರಣ್ಯ (ಸಂರಕ್ಷಣಾ) ಕಾಯ್ದೆ-1980, ಕಲಂ-2ರಡಿ ಕೇಂದ್ರ ಸರ್ಕಾರದಿಂದ ಪೂರ್ವಾನುಮತಿ ಪಡೆಯಲು ಉಪಯೋಗಿ ಸಂಸ್ಥೆಯು ಸಲ್ಲಿಸಿರುವ ಪ್ರಸ್ತಾವನೆಯನ್ನು ಹಾಗೂ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ರವರ ಶಿಫಾರಸ್ಸನ್ನು ಪರಾಮರ್ಶಿಸಿ ದಿನಾಂಕ:09-02-2021ರಂದು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.<br><br>ಕೇಂದ್ರ ಸರ್ಕಾರವು ದಿನಾಂಕ:18-02-2021ರಂದು EDS Query (ಹೆಚ್ಚುವರಿ ಮಾಹಿತಿ) ಕೇಳಿದ್ದು, ಉಪಯೋಗಿ ಸಂಸ್ಥೆಯು ದಿನಾಂಕ:15-02-2022ರಂದು ಮಾಹಿತಿಯನ್ನು ಒದಗಿಸಿದ್ದು, ನಿಯಮಾನುಸಾರ ಪರಿಶೀಲಿಸಿ ಕೇಂದ್ರ ಸರ್ಕಾರಕ್ಕೆ ಮಾಹಿತಿ ಸಲ್ಲಿಸಲಾಗುವುದು. |
| ಇ) | ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಅರಣ್ಯ ಇಲಾಖೆಯ ಅನುಮೋದನೆ ನಿರೀಕ್ಷೆಯಲ್ಲಿದ್ದು, ಈ ಬಗ್ಗೆ ಅರಣ್ಯ ಇಲಾಖೆ ಕೈಗೊಂಡ ಕ್ರಮಗಳೇನು? (ಸಂಪೂರ್ಣವಾದ ವಿವರ ನೀಡುವುದು) | |

ಸಂಖ್ಯೆ: ಅಪಜೀ 23 ಎಫ್‌ಎಫ್‌ಎಂ 2022 (ಇ)

(ಉಮೇಶ ವಿ. ಕತ್ತಿ)
ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು